₹ 5
ಸಂಪುಟ: 3 ಸಂಚಿಕೆ: 262 ಪುಟಗಳು: 12+4
03.10.2018 ಬುಧವಾರ
ಬೆಂಗಳೂರು | ಹುಬ್ಬಳ್ಳಿ | ಮಂಗಳೂರು
ದಾವಣಗೆರೆ | ಕಲಬುರಗಿ | ಬೆಳಗಾವಿ
@vishwavaninews
vishwavanitimely
epaper.vishwavani.news
vishwavani.news
ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ದಾರಿದೀಪೋಕ್ತಿ
ವಾದ ಮಾಡುವ ಬದಲು ಸಂವಾದ ಮಾಡುವುದನ್ನು ರೂಢಿಸಿಕೊಳ್ಳಬೇಕು. ವಾದದಲ್ಲಿ ನಮ್ಮ ಅಹಂಕಾರವನ್ನು ಪ್ರದರ್ಶಿಸುತ್ತೇವೆ. ಸಂವಾದದಲ್ಲಿ ಬೇರೆಯವರಿಂದ ಜ್ಞಾನ, ಮಾಹಿತಿ ಸ್ವೀಕರಿಸುತ್ತೇವೆ.

ವಕ್ರತುಂಡೋಕ್ತಿ
ಮನುಷ್ಯರು ಮಾತ್ರ ಹೀಗಿರಲು ಸಾಧ್ಯ. ಹುಲ್ಲು ಬೆಳೆದು ಎತ್ತರವಾಗಲಿ ಎಂದು ನೀರು ಹಾಕುತ್ತಾರೆ. ಎತ್ತರವಾಗುತ್ತಿದ್ದಂತೆ ಕತ್ತರಿಸಿ ಹಾಕುತ್ತಾರೆ.

ವಿಶ್ವವಾಣಿ
ವಿಶ್ವಾಸವೇ ವಿಶ್ವ

CENTRAL LIBRARY

ವಿವಾಹ್
ಪ್ರೀತಿಗಾಗಿ ಕನವರಿಸುತ್ತಿದೆ ಹೃದಯ ಜೋಳಿಗೆ

# ಸಿಟಿ ಪೊಲೀಸ್‌ಗೆ 'ಬ್ರ್ಯಾಂಡ್ ಮಂಗಳೂರು ಟ್ರೋಫಿ'

**ವಿಶ್ವವಾಣಿ ಸುದ್ದಿಮನೆ** ಮಂಗಳೂರು

ಪತ್ರಕರ್ತರ ಸಂಘದವರು ಆಯೋಜಿಸಿದ್ದ ಬ್ರ್ಯಾಂಡ್ ಮಂಗಳೂರು ಫ್ರೆಂಡ್‌ಶಿಪ್ ಕ್ರಿಕೆಟ್ ಕೂಟದ ಟ್ರೋಫಿಯನ್ನು ಸಿಟಿ ಪೊಲೀಸ್ ತಂಡ ಗೆದ್ದುಕೊಂಡಿದ್ದು, ಪೊಲೀಸ್ ಕಮಿಷನರ್ ಟಿ.ಆರ್.ಸುರೇಶ್ ಅವರು ಟ್ರೋಫಿಯನ್ನು ಕಪ್ತಾನ ಇನ್‌ಸ್ಪೆಕ್ಟರ್ ರಫೀಕ್ ನೇತೃತ್ವದ ತಂಡಕ್ಕೆ ಪ್ರದಾನ ಮಾಡಿದರು.

ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ಮಂಗಳೂರು ಪ್ರೆಸ್‌ಕ್ಲಬ್ ಹಾಗೂ ಪತ್ರಿಕಾ ಭವನ ಟ್ರಸ್ಟ್ ಆಶ್ರಯದಲ್ಲಿ ಅಡ್ಯಾರ್ ಸಹ್ಯಾದ್ರಿ ಕಾಲೇಜು ಕ್ರೀಡಾಂಗಣದಲ್ಲಿ ಮಂಗಳವಾರ ಫ್ರೆಂಡ್ಶಿಪ್ ಕ್ರಿಕೆಟ್ ಟೂರ್ನಿ ನಡೆಯಿತು.

ಜಿಲ್ಲಾಧಿಕಾರಿ ಇಲೆವೆನ್ ತಂಡ ರನ್ನರ್ಸ್ ಅಪ್ ಟ್ರೋಫಿ ಗೆದ್ದುಕೊಂಡಿತು.

ವೈಯಕ್ತಿಕ ಪ್ರಶಸ್ತಿ: ಫೈನಲ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಪತ್ರಕರ್ತರ ತಂಡದ ಧೀರಜ್ ಬೆಸ್ಟ್ ಬ್ಯಾಟ್ಸ್‌ಮನ್, ಡಿಸಿ ಇಲೆವೆನ್‌ನ ಕರುಣಾಕರ್ ಬೆಸ್ಟ್ ಬೌಲರ್, ಸಿಟಿ ಪೊಲೀಸ್ ತಂಡದ ರಂಜನ್ ಪಂದ್ಯ ಶ್ರೇಷ್ಠ, ಸಿಟಿ ಪೊಲೀಸ್ ತಂಡ ರೋಹಿತ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ಅತಿ ಹೆಚ್ಚು ಸಿಕ್ಸರ್ ಬಾರಿಸಿದ ಧೀರಜ್‌ಗೆ ಹಾಗೂ ಅತೀ ಹೆಚ್ಚು ವಿಕೆಟ್ ಪಡೆದ ರಂಜನ್‌ಗೆ ಸುದ್ದಿ ಬಿಡುಗಡೆಯಿಂದ ವಿಶೇಷ ಬಹುಮಾನ ನೀಡಲಾಯಿತು.



ಮಂಗಳೂರು ಪೊಲೀಸ್ ಕಮಿಷನರ್ ಟಿ.ಆರ್.ಸುರೇಶ್ ಅವರು ಟ್ರೋಫಿಯನ್ನು ಕಪ್ತಾನ ಇನ್‌ಸ್ಪೆಕ್ಟರ್ ರಫೀಕ್ ನೇತೃತ್ವದ ತಂಡಕ್ಕೆ ಪ್ರದಾನ ಮಾಡಿದರು.

**6 ತಂಡಗಳ ಮುಖಾಮುಖಿ:** ಪಂದ್ಯಾಟದಲ್ಲಿ ಮಂಗಳೂರು ನಗರ ಪೊಲೀಸ್, ದ.ಕ. ಜಿಲ್ಲಾ ಎಸ್ಪಿ ತಂಡ, ನಗರ ಪತ್ರಕರ್ತರ ತಂಡ, ಗ್ರಾಮೀಣ ಪತ್ರಕರ್ತರ ತಂಡ, ಸಹ್ಯಾದ್ರಿ ಪ್ರೆಸಿಡೆಂಟ್ ಇಲೆವೆನ್, ಡಿಸಿ ಇಲೆವನ್ ತಂಡಗಳ ಮಧ್ಯೆ ಸ್ಪರ್ಧೆ ನಡೆಯಿತು. ಎ ಮತ್ತು ಬಿ ವಿಭಾಗದಲ್ಲಿ ಲೀಗ್ ಪಂದ್ಯಾಟ ನಡೆದು ಉತ್ತಮ ಪ್ರದರ್ಶನ ನೀಡಿದ ಸಿಟಿ ಪೊಲೀಸ್ ಮತ್ತು ಜಿಲ್ಲಾಧಿಕಾರಿ ತಂಡ ತಂಡ ಫೈನಲ್‌ಗೆ ಏರಿತ್ತು.

ಟ್ರೋಫಿ ಗೆದ್ದ ಪೊಲೀಸ್ ತಂಡಕ್ಕೆ ಪೊಲೀಸ್ ಕಮಿಷನರ್ ಅವರು 10ಸಾವಿರ ರು. ವಿಶೇಷ ಬಹುಮಾನ ಘೋಷಣೆ ಮಾಡಿದರು.

ಪೊಲೀಸ್ ಕಮಿಷನರ್ ಟಿ.ಆರ್. ಸುರೇಶ್, ಡಿಸಿಪಿ ಉಮಾಪ್ರಶಾಂತ್, ಸಹ್ಯಾದ್ರಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ. ಮಂಜುನಾಥ ಭಂಡಾರಿ, ದ.ಕ. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ್ ಇಂದಾಜೆ, ಕಾರ್ಯದರ್ಶಿ ಇಬ್ರಾಹಿಂ ಅಡ್ಕಸ್ಥಳ, ಮಾಜಿ ಅಂತಾರಾಷ್ಟ್ರೀಯ ಅಥ್ಲೀಟ್ ಸುನೀಲ್ ಶೆಟ್ಟಿ, ಅಂತಾರಾಷ್ಟ್ರೀಯ ಮಟ್ಟದ ಪವರ್‌ಲಿಫ್ಟರ್ ವಿಜಯ ಕಾಂಚನ್ ಇದ್ದರು. ಕಾರ್ಯದರ್ಶಿ ಜಿತೇಂದ್ರ ಕುಂದೇಶ್ವರ ನಿರೂಪಿಸಿದರು.

ಮುಂಜಾನೆ ಮಾತು
ನಾವೆಲ್ಲಾ ತೆಗೆದುಕೊಳ್ಳುವುದರಲ್ಲಿ ಆನಂದ ಅನುಭವಿಸುವವರೇ. ಅದಕ್ಕಿಂತ ಹೆಚ್ಚು ಸಂತೋಷ ನೀಡುವುದರಲ್ಲಿದೆ ಎಂದು ಅರಿವಾದರೆ ಜೀವನದ ಬಹುದೊಡ್ಡ ಸೊಬಗಿಗೆ ತೆರೆದುಕೊಂಡಂತೆ. ಕೊಟ್ಟು ಆನಂದಿಸೋಣ.

ವಿಜಯವಾಣಿ
ಕನ್ನಡಿಗರ ಧ್ವನಿ
ನಂ. 1 ಕನ್ನಡ ದಿನಪತ್ರಿಕೆ

ಬೆಂಗಳೂರು ಮಂಗಳೂರು ಹುಬ್ಬಳ್ಳಿ ವಿಜಯಪುರ ಮೈಸೂರು ಗಂಗಾವತಿ ಚಿತ್ರದುರ್ಗ ಶಿವಮೊಗ್ಗ ಕಲಬುರಗಿ ಬೆಳಗಾವಿ VIJAYAVANI ● MANGALURU ಮಂಗಳೂರು ● ಸಂಪುಟ 7 ● ಸಂಚಿಕೆ 18
vijayavani.net ಇ-ಪೇಪರ್: epapervijayavani.in VVani4U @VVANI4U vijayavaninews@gmail.com ಸಹಾಯವಾಣಿ: 8884411682 3 ಅಕ್ಟೋಬರ್ 2018 | ಬುಧವಾರ



# ಮಂಗಳೂರು ಸಿಟಿ ಪೊಲೀಸ್ ತಂಡ ಚಾಂಪಿಯನ್

## ಬ್ರ್ಯಾಂಡ್ ಮಂಗಳೂರು ಫ್ರೆಂಡ್‌ಶಿಪ್ ಕ್ರಿಕೆಟ್ ಟೂರ್ನಿ | ಜಿಲ್ಲಾಧಿಕಾರಿ ಇಲೆವೆನ್ ತಂಡ ರನ್ನರ್ಸ್

■ ವಿಜಯವಾಣಿ ಸುದ್ದಿಜಾಲ ಮಂಗಳೂರು

ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ಮಂಗಳೂರು ಪ್ರೆಸ್‌ಕ್ಲಬ್ ಹಾಗೂ ಪತ್ರಿಕಾ ಭವನ ಟ್ರಸ್ಟ್ ಆಶ್ರಯದಲ್ಲಿ ಅಡ್ಯಾರ್ ಸಹ್ಯಾದ್ರಿ ಕಾಲೇಜು ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ಬ್ರ್ಯಾಂಡ್ ಮಂಗಳೂರು ಫ್ರೆಂಡ್ ಶಿಪ್ ಕ್ರಿಕೆಟ್ ಟೂರ್ನಿ ಫೈನಲ್‌ನಲ್ಲಿ ಜಿಲ್ಲಾಧಿಕಾರಿ ಇಲೆವೆನ್ ತಂಡವನ್ನು ಸೋಲಿಸುವ ಮೂಲಕ ನಗರ ಪೊಲೀಸ್ ತಂಡ ಪ್ರಶಸ್ತಿ ಗೆದ್ದುಕೊಂಡಿತು.

» ಅಡ್ಯಾರ್ ಸಹ್ಯಾದ್ರಿ ಕಾಲೇಜು ಕ್ರೀಡಾಂಗಣದಲ್ಲಿ ಕ್ರಿಕೆಟ್ ಟೂರ್ನಿ

ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದ ನಗರ ಪೊಲೀಸ್ ತಂಡ ಫೀಲ್ಡಿಂಗ್ ಆಯ್ದುಕೊಂಡಿತು. ಬ್ಯಾಟಿಂಗ್ ಇಳಿದ ಡಿಸಿ ಇಲೆವೆನ್ ತಂಡ 5 ಓವರ್‌ನಲ್ಲಿ 9 ವಿಕೆಟ್‌ಗಳನ್ನು ಕಳೆದುಕೊಂಡು 26 ರನ್ ಗಳಿಸುವಲ್ಲಿ ಯಶಸ್ವಿಯಾಯಿತು. ಇದಕ್ಕುತ್ತರವಾಗಿ ಬ್ಯಾಟಿಂಗ್‌ಗಿಳಿದ ನಗರ ಪೊಲೀಸರು 3 ಓವರ್‌ನಲ್ಲಿ 3 ವಿಕೆಟ್ ಕಳೆದುಕೊಂಡು 27 ರನ್ ಗಳಿಸುವ ಮೂಲಕ ವಿಜಯ ಸಾಧಿಸಿದರು. ಈ ಮೂಲಕ ಮಂಗಳೂರು ನಗರ ಪೊಲೀಸ್ ಚಾಂಪಿಯನ್ ಪ್ರಶಸ್ತಿ ತನ್ನದಾಗಿಸಿಕೊಂಡರೆ, ಜಿಲ್ಲಾಧಿಕಾರಿ ತಂಡ ರನ್ನರ್ ಅಪ್ ಪ್ರಶಸ್ತಿ ಗಳಿಸಿಕೊಂಡಿತು.

**ವೈಯಕ್ತಿಕ ಪ್ರಶಸ್ತಿ:** ಫೈನಲ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ನಗರಪೊಲೀಸ್ ತಂಡದ ಧೀರಜ್ ಬೆಸ್ಟ್ ಬ್ಯಾಟ್ಸ್‌ಮನ್, ಡಿಸಿ ಇಲೆವೆನ್‌ನ ಕರುಣಾಕರ್ ಬೆಸ್ಟ್ ಬೌಲರ್, ಸಿಟಿ ಪೊಲೀಸ್ ತಂಡದ ರಂಜನ್ ಮ್ಯಾನ್ ಆಫ್ ದಿ ಮ್ಯಾಚ್, ರೋಹಿತ್ ಮ್ಯಾನ್ ಆಫ್ ದಿ ಸೀರಿಸ್ ಪ್ರಶಸ್ತಿ ತಮ್ಮದಾಗಿಸಿಕೊಂಡರು. ಅತೀ ಹೆಚ್ಚು ಸಿಕ್ಸರ್ ಬಾರಿಸಿದ ಧೀರಜ್ ಅವರಿಗೆ ಹಾಗೂ ಅತೀ ಹೆಚ್ಚು ವಿಕೆಟ್ ಪಡೆದ ರಂಜನ್ ಅವರಿಗೆ ಸುದ್ದಿ ಬಿಡುಗಡೆ ವತಿಯಿಂದ ವಿಶೇಷ ಬಹುಮಾನ ನೀಡಲಾಯಿತು.

ಪ್ರಶಸ್ತಿ ವಿತರಣಾ ಕಾರ್ಯಕ್ರಮದಲ್ಲಿ ಮಂಗಳೂರು ನಗರ ಪೊಲೀಸ್ ಆಯುಕ್ತ ಟಿ.ಆರ್. ಸುರೇಶ್, ಮಂಗಳೂರು ನಗರ ಉಪ ಪೊಲೀಸ್ ಆಯುಕ್ತೆ ಉಮಾಪ್ರಶಾಂತ್, ಸಹ್ಯಾದ್ರಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಮಂಜುನಾಥ ಭಂಡಾರಿ, ದ.ಕ. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ್ ಇಂದಾಜೆ, ಮಾಜಿ ಅಂತಾರಾಷ್ಟ್ರೀಯ ಕ್ರೀಡಾಪಟು ಸುನೀಲ್ ಶೆಟ್ಟಿ ವಿಜೇತರಿಗೆ ಅಭಿನಂದನೆ ಸಲ್ಲಿಸಿದರು. ಮೊದಲ ಪ್ರಶಸ್ತಿ ಪಡೆದ ನಗರ ಪೊಲೀಸ್ ತಂಡಕ್ಕೆ ಪೊಲೀಸ್ ಕಮಿಷನರ್ 10 ಸಾವಿರ ರೂ. ವಿಶೇಷ ಬಹುಮಾನ ಘೋಷಣೆ ಮಾಡಿದರು.

**ಸಾಂಕೇತಿಕ ಉದ್ಘಾಟನೆ:** ಪಂದ್ಯಾಟವನ್ನು ಬೆಳಗ್ಗೆ ಮಂಗಳೂರು ನಗರ ಪೊಲೀಸ್ ಉಪ ಪೊಲೀಸ್ ಆಯುಕ್ತೆ ಉಮಾಪ್ರಶಾಂತ್ ಮತ್ತು ದ.ಕ. ಜಿಲ್ಲಾ ಎಎಸ್ಪಿ ಸಜಿತ್ ಉದ್ಘಾಟಿಸಿದರು. ಎಡಿಷನಲ್ ಎಸ್ಪಿ ಋಷಿಕೇಶ್ ಸೋನಾವಣೆ, ದ.ಕ. ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷ ದಯಾನಂದ್ ಕುಕ್ಕಾಜೆ, ಪ್ರಧಾನ ಕಾರ್ಯದರ್ಶಿ ಇಬ್ರಾಹಿಂ ಅಡ್ಕಸ್ಥಳ, ಪ್ರೆಸ್‌ಕ್ಲಬ್ ಹಂಗಾಮಿ ಅಧ್ಯಕ್ಷ ಪುಂಡಲೀಕ ಪೈ ಉಪಸ್ಥಿತರಿದ್ದರು. ಕಾರ್ಯದರ್ಶಿ ಜಿತೇಂದ್ರ ಕುಂದೇಶ್ವರ ಸ್ವಾಗತಿಸಿ, ಭಾಸ್ಕರ ರೈ ಕಟ್ಟ ವಂದಿಸಿದರು.




ಬ್ರ್ಯಾಂಡ್ ಮಂಗಳೂರು ಫ್ರೆಂಡ್‌ಶಿಪ್ ಕ್ರಿಕೆಟ್ ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದ ನಗರ ಪೊಲೀಸ್ ತಂಡದ ಸದಸ್ಯರು.

### 6 ತಂಡಗಳ ಮುಖಾಮುಖಿ

ಪಂದ್ಯಾಟದಲ್ಲಿ ಮಂಗಳೂರು ನಗರ ಪೊಲೀಸ್, ದ.ಕ. ಜಿಲ್ಲಾ ಎಸ್ಪಿ ತಂಡ, ನಗರ ಪತ್ರಕರ್ತರ ತಂಡ, ಗ್ರಾಮೀಣ ಪತ್ರಕರ್ತರ ತಂಡ, ಸಹ್ಯಾದ್ರಿ ಪ್ರೆಸಿಡೆಂಟ್ ಇಲೆವೆನ್, ಡಿಸಿ ಇಲೆವನ್ ತಂಡಗಳ ನಡುವೆ ಸ್ಪರ್ಧೆ ನಡೆಯಿತು. ಎ ಮತ್ತು ಬಿ ವಿಭಾಗದಲ್ಲಿ ಲೀಗ್ ಪಂದ್ಯಾಟ ನಡೆದು ಉತ್ತಮ ಪ್ರದರ್ಶನ ನೀಡಿದ ಸಿಟಿ ಪೊಲೀಸ್ ಮತ್ತು ನಗರ ಪತ್ರಕರ್ತರ ತಂಡ ಫೈನಲ್‌ಗೇರಿತ್ತು.

ಬುಧವಾರ, 3 ಅಕ್ಟೋಬರ್ 2018 | ಪುಟಗಳು: 10+3+3 | ಬೆಲೆ: ₹ 5.00
www.vijaykarnataka.com
ಸಂಪುಟ: 18 | ಸಂಚಿಕೆ: 68
ಮಂಗಳೂರು | ಬೆಂಗಳೂರು | ಮೈಸೂರು | ಶಿವಮೊಗ್ಗ | ಹುಬ್ಬಳ್ಳಿ | ಬಾಗಲಕೋಟ | ಕಲಬುರಗಿ

VK
ವಿಜಯ ಕರ್ನಾಟಕ



2030ರ ವೇಳೆಗೆ ಅಸಾಂಪ್ರದಾಯಿಕ ಇಂಧನ ಮೂಲಗಳಿಂದ 40% ವಿದ್ಯುತ್: ಮೋದಿ

ಶಿಕ್ಷಕರ ವರ್ಗಾವಣೆ ಸಂಕಟ
ಸಾವಿರಾರು ಮಂದಿಗೆ ನಿತ್ಯವೂ ಟೆನ್ಶನ್ P01

ಅಮೆರಿಕದ ಉತ್ಪನ್ನಗಳ ತೆರಿಗೆ ಹೆಚ್ಚಿಸಿದ್ದಕ್ಕೆ ಸಿಟ್ಟು ಭಾರತವನ್ನು ಸುಂಕಗಳ ರಾಜ ಎಂದ ಟ್ರಂಪ್

# ಪೊಲೀಸ್ ತಂಡಕ್ಕೆ ಬ್ರ್ಯಾಂಡ್ ಮಂಗಳೂರು ಟ್ರೋಫಿ

**ವಿಕ ಸುದ್ದಿಲೋಕ** ಮಂಗಳೂರು

ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ಮಂಗಳೂರು ಪ್ರೆಸ್‌ಕ್ಲಬ್ ಹಾಗೂ ಪತ್ರಿಕಾ ಭವನ ಟ್ರಸ್ಟ್ ಆಶ್ರಯದಲ್ಲಿ ಅಡ್ಯಾರ್ ಸಹ್ಯಾದ್ರಿ ಕಾಲೇಜು ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ಬ್ರ್ಯಾಂಡ್ ಮಂಗಳೂರು ಫ್ರೆಂಡ್‌ಶಿಪ್ ಕ್ರಿಕೆಟ್ ಟೂರ್ನಿಯ ಫೈನಲ್‌ನಲ್ಲಿ ಡಿಸಿ ಇಲೆವೆನ್ ತಂಡವನ್ನು ಸೋಲಿಸುವ ಮೂಲಕ ನಗರ ಪೊಲೀಸ್ ತಂಡ ಪ್ರಶಸ್ತಿ ಗೆದ್ದುಕೊಂಡಿತು.

ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದ ನಗರ ಪೊಲೀಸ್ ತಂಡ ಫೀಲ್ಡಿಂಗ್ ಆಯ್ದುಕೊಂಡಿತು. ಬ್ಯಾಟಿಂಗ್ ಇಳಿದ ಡಿಸಿ ಇಲೆವೆನ್ ತಂಡ 5 ಓವರ್‌ನಲ್ಲಿ 9 ವಿಕೆಟ್‌ಗಳನ್ನು ಕಳೆದುಕೊಂಡು 26ರನ್ ಗಳಿಸುವಲ್ಲಿ ಯಶಸ್ವಿಯಾಯಿತು. ಇದಕ್ಕುತ್ತರವಾಗಿ ಬ್ಯಾಟಿಂಗ್‌ಗಿಳಿದ ನಗರ ಪೊಲೀಸರು 3 ಓವರ್‌ನಲ್ಲಿ 3 ವಿಕೆಟ್ ಕಳೆದುಕೊಂಡು 27 ರನ್ ಗಳಿಸುವ ಮೂಲಕ ವಿಜಯ ಸಾಧಿಸಿದರು. ಈ ಮೂಲಕ ಮಂಗಳೂರು ನಗರ ಪೊಲೀಸ್ ವಿನ್ನರ್ ಪ್ರಶಸ್ತಿ ತನ್ನದಾಗಿಸಿಕೊಂಡರೆ, ಜಿಲ್ಲಾಧಿಕಾರಿ ತಂಡ ರನ್ನರ್ ಪ್ರಶಸ್ತಿ ಗಳಿಸಿಕೊಂಡಿತು.

**ವೈಯಕ್ತಿಕ ಪ್ರಶಸ್ತಿ:** ಫೈನಲ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಪತ್ರಕರ್ತರ ತಂಡದ ಧೀರಜ್ ಬೆಸ್ಟ್ ಬ್ಯಾಟ್ಸ್‌ಮನ್, ಡಿಸಿ ಇಲೆವೆನ್‌ನ ಕರುಣಾಕರ್ ಬೆಸ್ಟ್ ಬೌಲರ್, ಸಿಟಿ ಪೊಲೀಸ್ ತಂಡದ ರಂಜನ್ ಮ್ಯಾನ್ ಆಫ್‌ದಿ ಮ್ಯಾಚ್, ಸಿಟಿ ಪೊಲೀಸ್ ತಂಡ ರೋಹಿತ್ ಮ್ಯಾನ್ ಆಫ್ ದಿ ಸೀರಿಸ್ ಪ್ರಶಸ್ತಿ ತಮ್ಮದಾಗಿಸಿಕೊಂಡರು. ಅತೀ ಹೆಚ್ಚು ಸಿಕ್ಸರ್ ಬಾರಿಸಿದ ಧೀರಜ್ ಅವರಿಗೆ ಹಾಗೂ ಅತೀ ಹೆಚ್ಚು ವಿಕೆಟ್ ಪಡೆದ ರಂಜನ್ ಅವರಿಗೆ ಸುದ್ದಿ ಬಿಡುಗಡೆ ವತಿಯಿಂದ ವಿಶೇಷ ಬಹುಮಾನ ನೀಡಲಾಯಿತು.

**6 ತಂಡಗಳ ಮುಖಾಮುಖಿ:** ಪಂದ್ಯಾಟದಲ್ಲಿ ಮಂಗಳೂರು ನಗರ ಪೊಲೀಸ್, ದ.ಕ. ಜಿಲ್ಲಾ ಎಸ್ಪಿ ತಂಡ, ನಗರ ಪತ್ರಕರ್ತರ ತಂಡ, ಗ್ರಾಮೀಣ ಪತ್ರಕರ್ತರ ತಂಡ, ಸಹ್ಯಾದ್ರಿ ಪ್ರೆಸಿಡೆಂಟ್ ಇಲೆವೆನ್, ಡಿಸಿ ಇಲೆವನ್ ತಂಡಗಳ ಮಧ್ಯೆ ಸ್ಪರ್ಧೆ ನಡೆಯಿತು. ಎ ಮತ್ತು ಬಿ ವಿಭಾಗದಲ್ಲಿ ಲೀಗ್ ಪಂದ್ಯಾಟ ನಡೆದು ಉತ್ತಮ ಪ್ರದರ್ಶನ ನೀಡಿದ ಸಿಟಿ ಪೊಲೀಸ್ ಮತ್ತು ಡಿಸಿ ಇಲವೆನ್ ತಂಡ ಫೈನಲ್ ಗೇರಿತ್ತು.

ಪ್ರಶಸ್ತಿ ವಿತರಣಾ ಕಾರ್ಯಕ್ರಮದಲ್ಲಿ ಮಂಗಳೂರು ನಗರ ಪೊಲೀಸ್ ಆಯುಕ್ತ ಟಿ. ಆರ್. ಸುರೇಶ್, ಮಂಗಳೂರು ನಗರ ಉಪಪೊಲೀಸ್ ಆಯುಕ್ತೆ ಉಮಾಪ್ರಶಾಂತ್, ಸಹ್ಯಾದ್ರಿ ಅಧ್ಯಕ್ಷ ಮಂಜುನಾಥ ಭಂಡಾರಿ, ದ.ಕ. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ್ ಇಂದಾಜೆ, ಮಾಜಿ ಅಂತಾರಾಷ್ಟ್ರೀಯ ಅಥ್ಲೀಟ್ ಸುನೀಲ್ ಶೆಟ್ಟಿ, ಉಪಸ್ಥಿತರಿದ್ದು, ವಿಜೇತರಿಗೆ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭ ಮೊದಲ ಪ್ರಶಸ್ತಿ ಪಡೆದ ನಗರ ಪೊಲೀಸ್ ತಂಡಕ್ಕೆ ಪೊಲೀಸ್ ಕಮಿಷನರ್ ಅವರು 10ಸಾವಿರ ರೂ. ವಿಶೇಷ ಬಹುಮಾನ ಘೋಷಣೆ ಮಾಡಿದರು.

**ಸಾಂಕೇತಿಕ ಉದ್ಘಾಟನೆ:** ಕಾರ್ಯಕ್ರಮವನ್ನು ಬೆಳಗ್ಗೆ ಮಂಗಳೂರು ನಗರ ಪೊಲೀಸ್ ಉಪ ಪೊಲೀಸ್ ಆಯುಕ್ತರಾದ ಉಮಾಪ್ರಶಾಂತ್ ಮತ್ತು ದ.ಕ. ಜಿಲ್ಲಾ ಎಎಸ್ಪಿ ಸಜಿತ್ ಅವರು ಉದ್ಘಾಟಿಸಿದರು. ಈ ಸಂದರ್ಭ ಸಹ್ಯಾದ್ರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಂಜುನಾಥ ಭಂಡಾರಿ, ಎಡಿಷನ್ ಎಸ್ಪಿ ಋಷಿಕೇಶ್ ಸೋನಾವಣೆ, ದ.ಕ. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ್ ಇಂದಾಜೆ, ಉಪಾಧ್ಯಕ್ಷ ದಯಾನಂದ್ ಕುಕ್ಕಾಜೆ, ಕಾರ್ಯದರ್ಶಿ ಇಬ್ರಾಹಿಂ ಅಡ್ಕಸ್ಥಳ, ಪ್ರೆಸ್‌ಕ್ಲಬ್ ಪ್ರಭಾರ ಅಧ್ಯಕ್ಷ ಅನ್ನು ಮಂಗಳೂರು ಉಪಸ್ಥಿತರಿದ್ದರು.



ಕನ್ನಡ ಹಾಗೂ ಇಂಗ್ಲಿಷ್‌ನಲ್ಲಿ ನಿಮ್ಮ ಕರಾವಳಿ ಭಾಗದ
ಹೆಚ್ಚೆಚ್ಚು ಸುದ್ದಿಗಳ ಮಿಂಚಿನ ವೇಗದ ಬ್ರೇಕಿಂಗ್ ಅಪ್‌ಡೇಟ್‌ಗಳು
ಇದೀಗ ನಿಮ್ಮ ಬೆರಳತುದಿಯಲ್ಲಿ!
ನಮ್ಮ ನ್ಯೂಸ್ ಆ್ಯಪ್ ಅನ್ನು
ಇಂದೇ ಡೌನ್‌ಲೋಡ್ ಮಾಡಿಕೊಳ್ಳಿ!
udayavani.com

ಉದಯವಾಣಿ
ಜನಮನದ ಜೀವನಾಡಿ
ಮಣಿಪಾಲ । ಬೆಂಗಳೂರು । ಹುಬ್ಬಳ್ಳಿ । ಕಲಬುರಗಿ । ದಾವಣಗೆರೆ । ಮುಂಬಯಿ
Regd.No.UDP/1259/2018-20 | udayavani.com | UDAYAVANI – KANNADA DAILY – MANIPAL ಮಣಿಪಾಲ, ಬುಧವಾರ, ಅಕ್ಟೋಬರ್ 3, 2018 ಬೆಲೆ: ₹ 5-00 ವಿದೇಶ ಬೆಲೆ: ₹ 6-00

CENTRAL LIBRARY

# ಸಿಟಿ ಪೊಲೀಸ್ ತಂಡಕ್ಕೆ 'ಬ್ರ್ಯಾಂಡ್ ಮಂಗಳೂರು' ಟ್ರೋಫಿ



ಬ್ರ್ಯಾಂಡ್ ಮಂಗಳೂರು ಫ್ರೆಂಡ್‌ಶಿಪ್ ಕ್ರಿಕೆಟ್ ಟೂರ್ನಿಯಲ್ಲಿ ನಗರ ಪೊಲೀಸ್ ತಂಡ ಪ್ರಶಸ್ತಿ ಗೆದ್ದುಕೊಂಡಿತು.

**ಮಹಾನಗರ,** ಅ.2: ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ಮಂಗಳೂರು ಪ್ರೆಸ್‌ಕ್ಲಬ್ ಹಾಗೂ ಪತ್ರಿಕಾ ಭವನ ಟ್ರಸ್ಟ್ ಆಶ್ರಯದಲ್ಲಿ ಅಡ್ಯಾರ್ ಸಹ್ಯಾದ್ರಿ ಕಾಲೇಜು ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ಬ್ರ್ಯಾಡ್ ಮಂಗಳೂರು ಫ್ರೆಂಡ್‌ಶಿಪ್ ಕ್ರಿಕೆಟ್ ಟೂರ್ನಿಯ ಫೈನಲ್‌ನಲ್ಲಿ ಜಿಲ್ಲಾಧಿಕಾರಿ ಇಲೆವೆನ್ ತಂಡವನ್ನು ಸೋಲಿಸುವ ಮೂಲಕ ನಗರ ಪೊಲೀಸ್ ತಂಡ ಪ್ರಶಸ್ತಿ ಗೆದ್ದುಕೊಂಡಿತು.

ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದ ನಗರ ಪೊಲೀಸ್ ತಂಡ ಫೀಲ್ಡಿಂಗ್ ಆಯ್ದುಕೊಂಡಿತು. ಬ್ಯಾಟಿಂಗ್ ನಡೆಸಿದ ಡಿಸಿ ಇಲೆವೆನ್ ತಂಡ 5 ಓವರ್‌ನಲ್ಲಿ 9 ವಿಕೆಟ್ ಕಳೆದುಕೊಂಡು 26ರನ್ ಗಳಿಸುವಲ್ಲಿ ಯಶಸ್ವಿಯಾಯಿತು. ಇದಕ್ಕುತ್ತರವಾಗಿ ಬ್ಯಾಟಿಂಗ್‌ಗೆ ಇಳಿದ ನಗರ ಪೊಲೀಸರು 3 ಓವರ್‌ನಲ್ಲಿ 3 ವಿಕೆಟ್ ಕಳೆದುಕೊಂಡು 27ರನ್ ಗಳಿಸುವ ಮೂಲಕ ವಿಜಯ ಸಾಧಿಸಿದರು. ಈ ಮೂಲಕ ಮಂಗಳೂರು ನಗರ ಪೊಲೀಸ್ ಚಾಂಪಿಯನ್ ಪ್ರಶಸ್ತಿ ತನ್ನದಾಗಿಸಿಕೊಂಡರೆ, ಜಿಲ್ಲಾಧಿಕಾರಿ ತಂಡ ರನ್ನರ್ಸ್ ಅಪ್ ಪ್ರಶಸ್ತಿ ಗಳಿಸಿಕೊಂಡಿತು.

## ವೈಯಕ್ತಿಕ ಪ್ರಶಸ್ತಿ

ಫೈನಲ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಪತ್ರಕರ್ತರ ತಂಡದ ಧೀರಜ್ ಬೆಸ್ಟ್ ಬ್ಯಾಟ್ಸ್‌ಮನ್, ಡಿಸಿ ಇಲೆವೆನ್‌ನ ಕರುಣಾಕರ್ ಬೆಸ್ಟ್ ಬೌಲರ್, ಸಿಟಿ ಪೊಲೀಸ್ ತಂಡದ ರಂಜನ್ ಮ್ಯಾನ್ ಆಫ್ ದಿ ಮ್ಯಾಚ್, ಸಿಟಿ ಪೊಲೀಸ್ ತಂಡ ರೋಹಿತ್ ಮ್ಯಾನ್ ಆಫ್ ದಿ ಸೀರಿಸ್ ಪ್ರಶಸ್ತಿ ತಮ್ಮದಾಗಿಸಿಕೊಂಡರು. ಅತೀ ಹೆಚ್ಚು ಸಿಕ್ಸರ್ ಬಾರಿಸಿದ ಧೀರಜ್ ಹಾಗೂ ಅತೀ ಹೆಚ್ಚು ವಿಕೆಟ್ ಪಡೆದ ರಂಜನ್ ಅವರಿಗೆ ವಿಶೇಷ ಬಹುಮಾನ ನೀಡಲಾಯಿತು.

ಪ್ರಶಸ್ತಿ ವಿತರಣೆಯಲ್ಲಿ ಮಂಗಳೂರು ನಗರ ಪೊಲೀಸ್ ಆಯುಕ್ತ ಟಿ.ಆರ್. ಸುರೇಶ್, ನಗರ ಉಪ ಪೊಲೀಸ್ ಆಯುಕ್ತೆ ಉಮಾಪ್ರಶಾಂತ್, ಸಹ್ಯಾದ್ರಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ। ಮಂಜುನಾಥ ಭಂಡಾರಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ್ ಇಂದಾಜೆ, ಮಾಜಿ ಅಂತಾರಾಷ್ಟ್ರೀಯ ಆ್ಯತ್ಲೆಟ್ ಸುನಿಲ್ ಶೆಟ್ಟಿ ಉಪಸ್ಥಿತರಿದ್ದರು.

ಮೊದಲ ಪ್ರಶಸ್ತಿ ಪಡೆದ ನಗರ ಪೊಲೀಸ್ ತಂಡಕ್ಕೆ ಪೊಲೀಸ್ ಕಮಿಷನರ್ ಅವರು 10 ಸಾವಿರ ರೂ. ಬಹುಮಾನ ಘೋಷಿಸಿದರು.

## 6 ತಂಡಗಳ ಮುಖಾಮುಖಿ

ಪಂದ್ಯಾಟದಲ್ಲಿ ಮಂಗಳೂರು ನಗರ ಪೊಲೀಸ್, ದ.ಕ. ಜಿಲ್ಲಾ ಎಸ್ಪಿ ತಂಡ, ನಗರ ಪತ್ರಕರ್ತರ ತಂಡ, ಗ್ರಾಮೀಣ ಪತ್ರಕರ್ತರ ತಂಡ, ಸಹ್ಯಾದ್ರಿ ಪ್ರೆಸಿಡೆಂಟ್ ಇಲೆವೆನ್, ಡಿಸಿ ಇಲೆವನ್ ತಂಡಗಳ ಮಧ್ಯೆ ಸ್ಪರ್ಧೆ ನಡೆಯಿತು. ಎ ಮತ್ತು ಬಿ ವಿಭಾಗದಲ್ಲಿ ಲೀಗ್ ಪಂದ್ಯಾಟ ನಡೆದು ಉತ್ತಮ ಪ್ರದರ್ಶನ ನೀಡಿದ ಸಿಟಿ ಪೊಲೀಸ್ ಮತ್ತು ಜಿಲ್ಲಾಧಿಕಾರಿಗಳ ತಂಡ ಫೈನಲ್ ಗೇರಿತ್ತು.

## ಸಾಂಕೇತಿಕ ಉದ್ಘಾಟನೆ

ಬೆಳಗ್ಗೆ ಮಂಗಳೂರು ನಗರ ಪೊಲೀಸ್ ಉಪ ಪೊಲೀಸ್ ಆಯುಕ್ತರಾದ ಉಮಾ ಪ್ರಶಾಂತ್ ಮತ್ತು ಜಿಲ್ಲಾ ಎಸ್ಪಿ ಸಜಿತ್ ಅವರು ಉದ್ಘಾಟಿಸಿದರು. ಎಡಿಷನ್ ಎಸ್ಪಿ ಋಷಿಕೇಶ್ ಸೋನಾವಣೆ, ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷ ದಯಾನಂದ್ ಕುಕ್ಕಾಜೆ, ಪ್ರಧಾನ ಕಾರ್ಯದರ್ಶಿ ಇಬ್ರಾಹಿಂ ಅಡ್ಕಸ್ಥಳ, ಪ್ರೆಸ್‌ಕ್ಲಬ್ ಅಧ್ಯಕ್ಷ ಪುಂಡಲೀಕ ಪೈ ಉಪಸ್ಥಿತರಿದ್ದರು.

ಕಾರ್ಯದರ್ಶಿ ಜಿತೇಂದ್ರ ಕುಂದೇಶ್ವರ ಸ್ವಾಗತಿಸಿ, ಭಾಸ್ಕರ ರೈ ಕಟ್ಟ ವಂದಿಸಿದರು.

ಕನ್ನಡ ಹಾಗೂ ಇಂಗ್ಲಿಷ್‌ನಲ್ಲಿ ನಿಮ್ಮ ಕರಾವಳಿ ಭಾಗದ ಹೆಚ್ಚಿನ ಸುದ್ದಿಗಳ ಮಿಂಚಿನ ವೇಗದ ಬ್ರೇಕಿಂಗ್ ಅಪ್‌ಡೇಟ್‌ಗಳು ಇದೀಗ ನಿಮ್ಮ ಬೆರಳತುದಿಯಲ್ಲಿ!
ನಮ್ಮ ನ್ಯೂಸ್ ಆ್ಯಪ್ ಅನ್ನು ಇಂದೇ ಡೌನ್‌ಲೋಡ್ ಮಾಡಿಕೊಳ್ಳಿ!
udayavani.com

ಉದಯವಾಣಿ
ಜನಮನದ ಜೀವನಾಡಿ
ಮಣಿಪಾಲ । ಬೆಂಗಳೂರು । ಹುಬ್ಬಳ್ಳಿ । ಕಲಬುರಗಿ । ದಾವಣಗೆರೆ । ಮುಂಬಯಿ
Regd.No.UDP/1259/2018-20 | udayavani.com | UDAYAVANI – KANNADA DAILY – MANIPAL ಮಣಿಪಾಲ, ಬುಧವಾರ, ಅಕ್ಟೋಬರ್ 3, 2018 ಬೆಲೆ: ₹ 5-00 ವಿದೇಶ ಬೆಲೆ: ₹ 6-00

CENTRAL LIBRARY

ಕ್ರೀಡೆ | ರಾಜ್ಯ ಮಟ್ಟದ ಅಂತರ್‌ಕಾಲೇಜು ಪವರ್ ಲಿಫ್ಟಿಂಗ್ ಸ್ಪರ್ಧೆ

# ಸಹ್ಯಾದ್ರಿ ಕಾಲೇಜು ತಂಡ ಚಾಂಪಿಯನ್




ರಾಜ್ಯ ಮಟ್ಟದ ಅಂತರ್‌ಕಾಲೇಜು ಪವರ್ ಲಿಫ್ಟಿಂಗ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದವರಿಗೆ ಪ್ರಶಸ್ತಿ ನೀಡಲಾಯಿತು.

**ಮಹಾನಗರ,** ಅ.2: ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ವತಿಯಿಂದ 19ನೇ ವಿಟಿಯು ರಾಜ್ಯ ಮಟ್ಟದ ಅಂತರ್‌ಕಾಲೇಜು ಪವರ್ ಲಿಫ್ಟಿಂಗ್ ಸ್ಪರ್ಧೆ ಕಾಲೇಜಿನ ನೇತ್ರಾವತಿ ಆಡಿಟೋರಿಯಂನಲ್ಲಿ ಸೆ.28 ಹಾಗೂ 29 ರಂದು ನಡೆಯಿತು.

ಮುಖ್ಯ ಅತಿಥಿಯಾಗಿದ್ದ ಭಂಡಾರಿ ಫೌಂಡೇಶನ್‌ನ ಟ್ರಸ್ಟಿ ದೇವದಾಸ್ ಹೆಗ್ಡೆ ಉದ್ಘಾಟಿಸಿದರು. ಸೆ.29 ರಂದು ಜರಗಿದ ಸಮಾರೋಪದಲ್ಲಿ ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ಅಧ್ಯಕ್ಷ ಮಂಜುನಾಥ್ ಭಂಡಾರಿ ಮುಖ್ಯ ಅತಿಥಿಯಾಗಿ ವಿಜೇತರಿಗೆ ಬಹುಮಾನ ವಿತರಿಸಿದರು.

## ಫಲಿತಾಂಶ

ಹುಡುಗಿಯರ ವಿಭಾಗ: ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತುಮ್ಯಾನೇಜ್‌ಮೆಂಟ್ ಮಂಗಳೂರು ಚಾಂಪಿಯನ್‌ಶಿಪ್ ಪಡೆದುಕೊಂಡಿತು. ಗ್ಲೋಬಲ್ ಅಕಾಡೆಮಿ ಆಫ್ ಟೆಕ್ನಾಲಜಿ (ಜಿಎಟಿ), ಬೆಂಗಳೂರು ರನ್ನರ್-ಅಪ್ ಹಾಗೂ ಜೆಎನ್‌ಎನ್‌ಸಿಇ ಶಿವಮೊಗ್ಗ ಮೂರನೇ ಸ್ಥಾನ ಪಡೆದುಕೊಂಡರು.

ಹುಡುಗರ ವಿಭಾಗ:ಎನ್‌ಎಂಎಎಂಐಟಿ ನಿಟ್ಟೆ ಚಾಂಪಿಯನ್‌ಶಿಪ್ ಪಡೆದುಕೊಂಡಿತು. ಜೆಎನ್‌ಎನ್ ಸಿಇ, ಶಿವಮೊಗ್ಗ ಸೈಂಟ್ ಜೋಸೆಫ್ ಎಂಜಿನಿಯರಿಂಗ್ ಕಾಲೇಜು ಮಂಗಳೂರು, ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ಮಂಗಳೂರು ರನ್ನರ್-ಅಪ್ ಹಂಚಿಕೊಂಡರು. ಕರ್ನಾಟಕದ ವಿವಿಧ ಎಂಜಿನಿಯರಿಂಗ್ ಕಾಲೇಜುಗಳಿಂದ ಒಟ್ಟು 140 ಹುಡುಗರು ಮತ್ತು 45 ಹುಡುಗಿಯರು ಪಾಲ್ಗೊಂಡಿದ್ದರು.

ಕಾಲೇಜಿನ ಎಂಬಿಎ ವಿದ್ಯಾರ್ಥಿ ಶೋಭಿತ್ ರೈ ಪವರ್ ಲಿಫ್ಟಿಂಗ್ (ಸ್ಕ್ವಾಟ್) 215.5 ಕೆಜಿ ತೂಕವನ್ನು ಎತ್ತಿ ವಿಟಿಯು ಇಂಟರ್ ಕಾಲೇಜು ಸ್ಪರ್ಧೆಯಲ್ಲಿ ತಮ್ಮ ಹಿಂದಿನ ದಾಖಲೆ ಮುರಿದರು.